# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 559 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 08.12.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ಉಜಿರೆ ಪೇಟೆಯಲ್ಲಿ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, 20000 ಕ್ಕಿಂತ ಅಧಿಕ ಜನಸಂಖ್ಯೆ ಹೊಂದಿರುವ ಹಾಗೂ ಪ್ರಮುಖ ಸಂಪರ್ಕ ಕೇಂದ್ರವಾಗಿರುವ ಉಜಿರೆಯಲ್ಲಿ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಇಲ್ಲದೇ ವಾಹನಗಳನ್ನು ಪುಟ್‌ಪಾತ್‌ನಲ್ಲಿ ನಿಲ್ಲಿಸುತ್ತಿರುವುದರಿಂದ, ಪಾದಚಾರಿಗಳಿಗೆ ಓಡಾಡಲು ಸಾಕಷ್ಟು ಅಡಚಣೆಯಾಗುತ್ತಿರುವುದನ್ನು ತಪ್ಪಿಸಲು ಗ್ರಾಮ ಪಂಚಾಯತ್ ಇದುವರೆಗೆ ಏನು ಕ್ರಮ ಕೈಗೊಂಡಿದೆ: (ಮಾಹಿತಿ ನೀಡುವುದು) | ಉಜಿರೆ - ಧರ್ಮಸ್ಥಳ ರಸ್ತೆಯನ್ನು ಲೋಕೋಪಯೋಗಿ ಇಲಾಖೆಯಿಂದ ರಸ್ತೆ ಅಗಲೀಕರಣಗೊಳಿಸಿದ್ದು, ವಾಹನಗಳಿಗೆ ಪಾರ್ಕಿಂಗ್‌ಗಾಗಿ ಸೂಕ್ತ ಸ್ಥಳವನ್ನು ನಿಗದಿಪಡಿಸಲಾಗಿದೆ.<br><br>ದಿನಾಂಕ:30-10-2023ರಂದು ನಡೆದ ಉಜಿರೆ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮುಂದಿನ ದಿನಗಳಲ್ಲಿ ಉಜಿರೆ ಪೇಟೆಯ ವಾಹನ ಮಾಲೀಕರು ಹಾಗೂ ಕಟ್ಟಡ ಮಾಲೀಕರು/ ಬಾಡಿಗೆದಾರರು ಮತ್ತು ಸಂಬಂಧಪಟ್ಟ ಅಧಿಕಾರಿಗಳ ಜಂಟಿ ಸಭೆಯನ್ನು ನಡೆಸಿ, ಉಜಿರೆ ಪೇಟೆಯ ಇತರ ಸ್ಥಳಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಕುರಿತು ಕ್ರಮ ವಹಿಸಲು ತೀರ್ಮಾನಿಸಲಾಗಿದೆ. |
| (ಇ) | ಉಜಿರೆಯಲ್ಲಿ ಬಸ್‌ಗಳು ನಿಲ್ಲಲು ಒಂದು ಕಡೆ ಜಾಗ ಕಲ್ಪಿಸಲು ಹಾಗೂ ಖಾಸಗಿ ವಾಹನ ಮತ್ತು ಬಾಡಿಗೆ ವಾಹನಗಳ ಪಾರ್ಕಿಂಗ್‌ಗೆ ಜಾಗ ಗುರುತಿಸಿ ಆ ಮೂಲಕ ಸೂಕ್ತ ಪಾರ್ಕಿಂಕ್ ವ್ಯವಸ್ಥೆ ಕಲ್ಪಿಸಲು ಈ ಕೂಡಲೇ ಸರ್ಕಾರ ಕ್ರಮ ವಹಿಸುವುದೇ? | ಹೌದು. |

ಸಂಖ್ಯೆ: ಗ್ರಾಅಪ 605 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.